ಆ) ಆಶ್ರಯ ಯೋಜನೆಯಡಿ ದಕ್ಷಿಣ ಕನ್ನಡ ಜಿಲ್ಲೆಗೆ ಈವರೆಗೆ 30134 ಮನೆಗಳನ್ನು ಮಂಜೂರು ಮಾಡಲಾಗಿದೆ.

ಇ) ಮಂಜೂರಾದ ಮನೆಗಳು ವಿವಿಧ ನಿರ್ಮಾಣ ಹಂತದಲ್ಲಿದ್ದು, ಪ್ರಗತಿ ಕಾರ್ಯ ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಈ) ಪ್ರಶ್ನೆ ಉದ್ಭವಿಸುವುದಿಲ್ಲ.

72 ಶ್ರೀ ಶ್ರೀರಾಮಲಿಂಗಾರೆಡ್ಡಿ (ಬಿ.ಟಿ.ಎಂ.ಲೇಔಟ್) : ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನೆರೆ ಪ್ರದೇಶಗಳ ಪುನರ್ವಸತಿಗಾಗಿ ಇಂದಿರಾ ಆವಾಸ್ ಯೋಜನೆಯಡಿಯಲ್ಲಿ ಹೆಚ್ಚು ಮನೆಗಳನ್ನು ನಿರ್ಮಿಸಬೇಕೆಂದು ಕೇಂದ್ರ ಸರ್ಕಾರ ಸೂಚನೆ ನೀಡಿದೆಯೇ;

ಆ) ಹಾಗಿದ್ದಲ್ಲಿ, ನೆರೆ ಪ್ರದೇಶಗಳಲ್ಲಿ ಸರ್ಕಾರ ಇಂದಿರಾ ಆವಾಸ್ ಯೋಜನೆಯಲ್ಲಿ ನಿರ್ಮಿಸಲಾಗುತ್ತಿರುವ ಮನೆಗಳ ಸಂಖ್ಯೆ ಎಷ್ಟು?

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಯವರು) :

ಅ) ಹೌದು.

ಆ) ಕೇಂದ್ರ ಸರ್ಕಾರದ ಸೂಚನೆಯಂತೆ ನೆರೆಪೀಡಿತರಿಗಾಗಿ ಇಂದಿರಾ ಆವಾಸ್ ಯೋಜನೆಯಡಿ ಹೆಚ್ಚುವರಿ ಮನೆಗಳನ್ನು ಒದಗಿಸಲು 7,437 ಫಲಾನುಭವಿಗಳ ಪಟ್ಟಿಯನ್ನು ಸಲ್ಲಿಸಲಾಗಿದೆ.

824 ಶ್ರೀ ರಮಾನಾಥ್ ರೈ ಬಿ. (ಬಂಟ್ವಾಳ) : ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಆಶ್ರಯ ಯೋಜನೆಯಲ್ಲಿ ಫಲಾನುಭವಿಗಳು ಸಾಲ ಮರುಪಾವತಿ ಮಾಡದವರ ಹಣದ ಮೊತ್ತವೆಷ್ಟು;

ಆ) ಈ ಸಾಲವನ್ನು ಮನ್ನಾ ಮಾಡುವ ಬಗ್ಗೆ ಸರ್ಕಾರ ಗಮನ ಹರಿಸಿದೆಯೇ;

ಇ) ಇದ್ದಲ್ಲಿ ಯಾವಾಗ ಮತ್ತು ಯಾವ ಹಂತದಲ್ಲಿ ಮನ್ನಾ ಮಾಡಲಾಗುವುದು?